**All India Radio: Bangalore**
**National Bulletin In Kannada**
**18.02.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.02.2026  1.10 p.m.**

**<><><><>**

ಮುಖ್ಯಾಂಶಗಳು

1. ಭಾರತದ ಎಐ ಇಂಪ್ಯಾಕ್ಟ್ ಶೃಂಗಸಭೆ ನೇಪಥ್ಯದಲ್ಲಿ ಜಾಗತಿಕ ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸರಣಿ ಸಭೆ
2. ವಿಶಾಖಪಟ್ಟಣದಲ್ಲಿ ಅಂತಾರಾಷ್ಟ್ರೀಯ ನೌಕಾಪಡೆ ವಿಮರ್ಶೆ ಪರಿಶೀಲಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು
3. ಹತ್ತು ರಾಜ್ಯಗಳ ೩೭ ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ಘೋಷಿಸಿದ ಚುನಾವಣಾ ಆಯೋಗ
4. ಎಐ ಕುರಿತು ವಾರ್ಷಿಕ ಜಾಗತಿಕ ಸಂವಾದ ನಡೆಸಲು ವಿಶ್ವಸಂಸ್ಥೆ ಯೋಜನೆ- ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್
5. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್:  ದಿನದ ಮೊದಲ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡಕ್ಕೆ ೧೨೩ ರನ್‌ಗಳ ಗುರಿ ನೀಡಿದ ಯುಎಇ

<><><><>

ಭಾರತದ ಎಐ ಇಂಪ್ಯಾಕ್ಟ್ ಶೃಂಗಸಭೆಗಾಗಿ ರಾಷ್ಟ್ರ ರಾಜಧಾನಿಗೆ ಆಗಮಿಸಿರುವ ಹಲವಾರು ಜಾಗತಿಕ ನಾಯಕರೊಂದಿಗೆ ಪ್ರಧಾನಿ ಅವರು ಇಂದು ಸರಣಿ ಸಭೆಗಳನ್ನು ನಡೆಸುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಸ್ಪೇನ್ ಅಧ್ಯಕ್ಷ ಪೆಡ್ರೊ ಸ್ಯಾಂಚೆಜ್ ಅವರೊಂದಿಗೆ ಸಭೆ ನಡೆಸಿದರು. ಉಭಯ ನಾಯಕರು, ಭಾರತ-ಸ್ಪೇನ್ ಪಾಲುದಾರಿಕೆಯನ್ನು ಬಲಪಡಿಸುವ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಿದರು. ಆರ್ಥಿಕತೆ, ವ್ಯಾಪಾರ, ಡಿಜಿಟಲ್, ನಾವೀನ್ಯತೆ, ಆರೋಗ್ಯ, ಹವಾಮಾನ ಕ್ರಮ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಪ್ರಮುಖವಾಗಿ ಚರ್ಚೆ ನಡೆಯಿತು ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರು, ಫಿನ್ಲೆಂಡ್ ಪ್ರಧಾನಿ ಆಂಟಿ ಪೆಟ್ಟೆರಿ ಓರ್ಪೋ

ಅವರೊಂದಿಗೆ ಮಾತುಕತೆ ನಡೆಸಿದರು. ಇದಕ್ಕೂ ಮುನ್ನ ಪ್ರಧಾನಿ ಮೋದಿ ಅವರು ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಭಾಗವಹಿಸಲು ನಗರಕ್ಕೆ ಬಂದಿರುವ ಗೂಗಲ್ ಸಿಇಒ ಸುಂದರ್ ಪಿಚೈ ಅವರನ್ನು ಭೇಟಿಯಾದರು. ಸೆರ್ಬಿಯಾ ಅಧ್ಯಕ್ಷ ಅಲೆಕ್ಸಾಂಡರ್ ವೂಚಿಕ್ ಅವರೊಂದಿಗೂ ಪ್ರಧಾನಿ ಮಾತುಕತೆ ನಡೆಸಿದ್ದಾರೆ. ಕ್ರೊಯೇಷಿಯಾದ ಪ್ರಧಾನಿ ಆಂಡ್ರೆಜ್ ಪ್ಲೆಂಕೋವಿಕ್, ಎಸ್ಟೋನಿಯಾ ಅಧ್ಯಕ್ಷ ಅಲರ್ ಕರಿಸ್, ಭೂತಾನ್ ಪ್ರಧಾನಿ ದಾಶೋ ತ್ಸೆರಿಂಗ್ ಟೋಬ್ಗೇ ಮತ್ತು ಕಝಾಕಿಸ್ತಾನ್ ಪ್ರಧಾನಿ ಓಲ್ಜಾಸ್ ಬೆಕ್ತೆನೋವ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಭೇಟಿ ಮಾಡಲಿದ್ದಾರೆ.

<><><>

ನೈಜ ಜಾಗತಿಕ ಸಮಸ್ಯೆಗಳನ್ನು ಪರಿಹರಿಸಲು ಭಾರತ, ಕೃತಕಬುದ್ಧಿಮತ್ತೆ ತಂತ್ರಜ್ಞಾನವನ್ನು ಸಮರ್ಥವಾಗಿ ಬಳಸಿಕೊಳ್ಳುವತ್ತ ಗಮನ ಕೇಂದ್ರೀಕರಿಸಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ದೆಹಲಿಯಲ್ಲಿ ನಡೆಯುತ್ತಿರುವ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಸಂಶೋಧನಾ ವಿಚಾರ ಗೋಷ್ಠಿಯ ಉದ್ಘಾಟನಾ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಉದ್ಯಮಗಳಲ್ಲಿ ಉತ್ಪಾದಕತೆಯನ್ನು ಹೆಚ್ಚಿಸುವುದರ ಜೊತೆಗೆ ಆರೋಗ್ಯ, ಕೃಷಿ ಮತ್ತು ಹವಾಮಾನ ಬದಲಾವಣೆಯಂತಹ ಸವಾಲುಗಳನ್ನು ಎದುರಿಸಲು ಭಾರತ ಕೃತಕಬುದ್ಧಿಮತ್ತೆಗೆ ಆದ್ಯತೆ ನೀಡುತ್ತಿದೆ ಎಂದರು. ಇದೇ ವೇಳೆ ಸಚಿವ ಅಶ್ವಿನಿ ವೈಷ್ಣವ್, ಎಐ ತಂತ್ರಜ್ಞಾನವನ್ನು ಸುರಕ್ಷಿತವಾಗಿಸುವುದು ಹೇಗೆ ಎಂಬ ಬಗ್ಗೆ ಸಲಹೆ ನೀಡುವಂತೆ ಗೋಷ್ಠಿಯಲ್ಲಿದ್ದ ತಜ್ಞರು ಹಾಗೂ ಸಂಶೋಧಕರಿಗೆ ಮನವಿ ಮಾಡಿದರು.

**ಧ್ವನಿ: ಅಶ್ವಿನಿ ವೈಷ್ಣವ್ ( ೨೬ ಸೆಕೆಂಡ್ಸ್)**

<><><>

ಸರ್ಬಿಯಾ ಅಧ್ಯಕ್ಷ ಅಲೆಗ್ಸಾಂಡರ್ ವೂಚಿಕ್ ಅವರು ಬರೆದ ಕೃತಕ ಬುದ್ಧಿಮತ್ತೆ ಕುರಿತ ಲೇಖನವೊಂದನ್ನು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಂಚಿಕೊಂಡಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಸರ್ಬಿಯಾ ಅಧ್ಯಕ್ಷರು ತಮ್ಮ ಲೇಖನದಲ್ಲಿ ಎಐ ಕ್ಷೇತ್ರದಲ್ಲಿ ಭಾರತದ ಸಾಧನೆ, ದೇಶದ ಕುರಿತು ಅವರ ಪೀತಿ ಮತ್ತು ಬಲಿಷ್ಠ ಭಾರತ-ಸರ್ಬಿಯಾ ಸಂಬಂಧಗಳ ಕುರಿತು ಉಲ್ಲೇಖಿಸಿರುವುದಾಗಿ ತಿಳಿಸಿದ್ದಾರೆ.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ವಿಶಾಖಪಟ್ಟಣದಲ್ಲಿ ಸಶಸ್ತ್ರ ಪಡೆಗಳ ಸರ್ವೋಚ್ಚ ಕಮಾಂಡರ್ ಆಗಿ ಅಂತಾರಾಷ್ಟ್ರೀಯ ನೌಕಾಪಡೆ ವಿಮರ್ಶೆ- ಐಎಫ್‌ಆರ್ ೨೦೨೬ ಅನ್ನು ಪರಿಶೀಲಿಸಿದರು. ಪೂರ್ವ ನೌಕಾ ಕಮಾಂಡ್‌ನಿಂದ ಗೌರವ ವಂದನೆ ಸ್ವೀಕರಿಸಿದ ರಾಷ್ಟ್ರಪತಿ ಅವರನ್ನು ಹಿರಿಯ ನೌಕಾ ಅಧಿಕಾರಿಗಳು ಸ್ವಾಗತಿಸಿದರು. ರಾಷ್ಟ್ರಪತಿಗಳ ವಿಹಾರ ನೌಕೆಯಾದ ಐಎನ್‌ಎಸ್ ಸುಮೇಧಾದಲ್ಲಿ, ಪ್ರಯಾಣಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ವಿಶಾಖಪಟ್ಟಣಂ ಕರಾವಳಿಯಲ್ಲಿದ್ದ ಭಾರತೀಯ ಮತ್ತು ವಿದೇಶಿ ನೌಕಾ ಹಡಗುಗಳ ಪ್ರಭಾವಶಾಲಿ ಶ್ರೇಣಿಯನ್ನು ಪರಿಶೀಲಿಸಿದರು. ಐಎಫ್‌ಆರ್ ಕಡಲ ಭದ್ರತೆಯನ್ನು ಹೆಚ್ಚಿಸುವ ಮತ್ತು ಮಿತ್ರ ರಾಷ್ಟ್ರಗಳ ನಡುವೆ ಸಹಕಾರ ಬೆಳೆಸುವ ಗುರಿ ಹೊಂದಿದೆ. ಈ ಕಾರ್ಯಕ್ರಮದಲ್ಲಿ ಆಂಧ್ರಪ್ರದೇಶದ ರಾಜ್ಯಪಾಲ ಎಸ್. ಅಬ್ದುಲ್ ನಜೀರ್, ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು, ಕೇಂದ್ರ ಸಚಿವ ಕೆ.ರಾಮ್ ಮೋಹನ್ ನಾಯ್ಡು, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಮತ್ತು ಇತರ ಹಿರಿಯ ಸರ್ಕಾರಿ ಅಧಿಕಾರಿಗಳು ಭಾಗವಹಿಸಿದ್ದರು. ವಿಶಾಖಪಟ್ಟಣಂ ೨೦೧೬ ರಿಂದ ಎರಡನೇ ಬಾರಿಗೆ ಅಂತಾರಾಷ್ಟ್ರೀಯ ನೌಕಾಪಡೆ ವಿಮರ್ಶೆಯನ್ನು ಆಯೋಜಿಸುತ್ತಿದೆ, ಇದು ಪ್ರಮುಖ ಕಡಲ ಕೇಂದ್ರ ಮತ್ತು ಅಂತಾರಾಷ್ಟ್ರೀಯ ನೌಕಾ ಏಕತೆಯ ಸಂಕೇತವಾಗಿ ತನ್ನ ಸ್ಥಾನಮಾನವನ್ನು ಪುನರುಚ್ಚರಿಸುತ್ತದೆ.

<><><>

ಚುನಾವಣಾ ಆಯೋಗ ಇಂದು ೧೦ ರಾಜ್ಯಗಳ ೩೭ ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ಘೋಷಿಸಿದೆ. ಈ ತಿಂಗಳ ೨೬ ರಂದು ಚುನಾವಣೆಗೆ ಅಧಿಸೂಚನೆ ಹೊರಡಿಸಲಾಗುವುದು ಮತ್ತು ಮಾರ್ಚ್ ೫ ರವರೆಗೆ ನಾಮಪತ್ರ ಸಲ್ಲಿಸಬಹುದಾಗಿದ್ದು, ಮಾರ್ಚ್ ೧೬ ರಂದು ಮತದಾನ ನಡೆಯಲಿದೆ. ಕೇಂದ್ರ ಸಚಿವ ರಾಮನಾಥ್ ಠಾಕೂರ್, ರಾಜ್ಯಸಭಾ ಉಪಾಧ್ಯಕ್ಷ ಹರಿವಂಶ್, ಎನ್‌ಸಿಪಿ-ಎಸ್‌ಪಿ ನಾಯಕ ಶರದ್ ಪವಾರ್ ಅವರು ಮೇಲ್ಮನೆಯಲ್ಲಿ ತಮ್ಮ ಅಧಿಕಾರಾವಧಿಯನ್ನು ಪೂರ್ಣಗೊಳಿಸುತ್ತಿರುವ ಪ್ರಮುಖರಾಗಿದ್ದಾರೆ.

<><><>

ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಕೇಂದ್ರ ಚುನಾವಣಾ ಆಯೋಗ, ಅಮಾನತುಗೊಳಿಸಿದ್ದ ಏಳು ಅಧಿಕಾರಿಗಳನ್ನು ರಾಜ್ಯದ ಇತರ ಆಡಳಿತಾತ್ಮಕ ಕಾರ್ಯಗಳಿಗೆ ಬಳಸಿಕೊಳ್ಳಲಾಗುವುದು ಎಂಬ

ಪಶ್ಚಿಮ ಬಂಗಾಳ ಸರ್ಕಾರದ ನಿರ್ಧಾರಕ್ಕೆ ಆಯೋಗ, ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಇದು ಅಮಾನತು ಆದೇಶದ ಮೂಲ ಆಶಯದ ಉಲ್ಲಂಘನೆ ಎಂದು ತಿಳಿಸಿದೆ.

<><><><>

ಕೃತಕ ಬುದ್ಧಿಮತ್ತೆಯನ್ನು ನಿಯಂತ್ರಿಸುವುದು ವಿಶ್ವಸಂಸ್ಥೆಯ ಕೆಲಸವಲ್ಲ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ತಿಳಿಸಿದ್ದಾರೆ. ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಅವರು, ವಿಶ್ವ ಸಂಸ್ಥೆಯು, ಸರ್ಕಾರಗಳು, ಖಾಸಗಿ ವಲಯ ಮತ್ತು ನಾಗರಿಕ ಸಮಾಜದ ಭಾಗವಹಿಸುವಿಕೆಯೊಂದಿಗೆ ಎಐ ಕುರಿತು ವಾರ್ಷಿಕ ಜಾಗತಿಕ ಸಂವಾದವನ್ನು ನಡೆಸಲು ಯೋಜಿಸಿದೆ ಎಂದು ಹೇಳಿದರು. ಎಐ ಕುರಿತು ಜಾಗತಿಕ ಸಹಕಾರವನ್ನು ಬಲಪಡಿಸಲು ಮೂರು ಪ್ರಮುಖ ಉಪಕ್ರಮಗಳನ್ನು ವಿವರಿಸಿದ ಅವರು, ಪ್ರಪಂಚದಾದ್ಯಂತದ ೪೦ ತಜ್ಞರನ್ನು ಒಳಗೊಂಡ ಕೃತಕ ಬುದ್ಧಿಮತ್ತೆಯ ಕುರಿತು ಉನ್ನತ ಮಟ್ಟದ ಸ್ವತಂತ್ರ ಅಂತರರಾಷ್ಟ್ರೀಯ ವೈಜ್ಞಾನಿಕ ಚಾವಡಿ ರಚಿಸುವುದು ಇದರಲ್ಲಿ ಸೇರಿದೆ ಎಂದರು. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಗಾಗಿ ಭಾರತಕ್ಕೆ ನೀಡುತ್ತಿರುವ ತಮ್ಮ ಭೇಟಿಯ ಸಮಯದಲ್ಲಿ, ವಿಶ್ವಸಂಸ್ಥೆಯ ಪ್ರಧಾನಕಾರ್ಯದರ್ಶಿಗಳು ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇದರ ಜೊತೆಗೆ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಲಿದ್ದು, ನವೀಕರಿಸಬಹುದಾದ ಇಂಧನ ಮತ್ತು ಜಾಗತಿಕ ಡಿಜಿಟಲ್ ಸಹಕಾರದ ಕುರಿತು ಚರ್ಚೆಗಳಲ್ಲಿ ಭಾಗವಹಿಸಲಿದ್ದಾರೆ.

<><><><>

ಬಾಂಗ್ಲಾದೇಶದ ವಿದೇಶಾಂಗ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಡಾ.ಖಲೀಲುರ್ ರೆಹಮಾನ್ ಅವರನ್ನು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅಭಿನಂದಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಡಾ.ಎಸ್.ಜೈಶಂಕರ್ ಅವರು, ಪರಸ್ಪರ ಪ್ರಗತಿ ಮತ್ತು ಸಮೃದ್ಧಿಗಾಗಿ ಭಾರತ-ಬಾಂಗ್ಲಾದೇಶ ಸಹಕಾರವನ್ನು ಮುನ್ನಡೆಸಲು ಒಟ್ಟಾಗಿ ಕೆಲಸ ಮಾಡಲು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ.

<><><><>

ಢಾಕಾದಲ್ಲಿ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಬಾಂಗ್ಲಾದೇಶದ ಜಮಾತ್ ಎ ಇಸ್ಲಾಮಿ ಅಧ್ಯಕ್ಷ ಶಫಿಕುರ್ ರೆಹಮಾನ್ ಅವರೊಂದಿಗೆ ಸಭೆ ನಡೆಸಿದ್ದು, ವಿರೋಧ ಪಕ್ಷದ ನಾಯಕನ ನೂತನ ಜವಾಬ್ದಾರಿಗಾಗಿ ಶುಭ ಹಾರೈಸಿದ್ದಾರೆ.

<><><><>

ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಮೂರು ಪಂದ್ಯಗಳು ಆಯೋಜನೆಗೊಂಡಿವೆ.

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ದಿನದ ಮೊದಲ ಪಂದ್ಯದಲ್ಲಿ ಯುಎಇ ತಂಡ, ದಕ್ಷಿಣ ಆಫ್ರಿಕಾ ತಂಡಕ್ಕೆ ೧೨೩ ರನ್‌ಗಳ ಗೆಲುವಿನ ಗುರಿ ನೀಡಿದೆ. ಮೊದಲು ಬ್ಯಾಟಿಂಗ್ ಮಾಡಿದ ಯುಎಇ ತಂಡ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೨೨ ರನ್ ಗಳಿಸಿತು. ಕೊಲಂಬೊದ ಸಿಂಹಳೀಸ್ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ಮಧ್ಯಾಹ್ನ ೩ ಗಂಟೆಗೆ ಪ್ರಾರಂಭಗೊಳ್ಳಲಿರುವ ಎರಡನೇ ಪಂದ್ಯದಲ್ಲಿ ಪಾಕಿಸ್ತಾನ ನಮೀಬಿಯಾ ತಂಡವನ್ನು ಎದುರಿಸಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಮೂರನೇ ಪಂದ್ಯದಲ್ಲಿ, ಭಾರತ ಮತ್ತು ನೆದರ್ಲೆಂಡ್ಸ್ ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>